ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಕೊಡಗು ಜಿಲ್ಲೆಯಲ್ಲಿ ಕಿತ್ತಳೆ ಹಾಗೂ ಏಲಕ್ಕಿ ತೋಟಗಳಿಗೆ ಆಗಿರುವ ಹಾನಿ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನ ಸಭೆಯಿಂದ ಚುನಾಯಿತರಾದವರು):-

146 (140) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 3 ವರ್ಷಗಳಿಂದ ಕೊಡಗು ಜಿಲ್ಲೆಯಲ್ಲಿ ಸುರಿದ ಧಾರಾಕಾರ ಮಳೆ ಹಾಗೂ ಭೂಕುಸಿತದಿಂದಾಗಿ ಕಿತ್ತಳೆ, ಏಲಕ್ಕಿ ತೋಟಗಳಿಗೆ ಸಾಕಷ್ಟು ಹಾನಿಯಾಗಿರುವುದರಿಂದ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಎಷ್ಟು ವಿಸ್ತೀರ್ಣದ ಕಿತ್ತಳೆ, ಏಲಕ್ಕಿ ತೋಟ ಹಾನಿಗೊಳಗಾಗಿದೆ; ಹಾಗೂ ಸದರಿ ನಷ್ಟದ ಅಂದಾಜಿನ ವಿವರಗಳೇನು;

(ಇ) ಕಳೆದ 3 ವರ್ಷಗಳಲ್ಲಿ ಕಿತ್ತಳೆ, ಏಲಕ್ಕಿ ಬೆಳೆಗಾರರಿಗೆ ಸರ್ಕಾರದಿಂದ ದೊರೆತಿರುವ ಪರಿಹಾರ, ನೆರವು ಹಾಗೂ ಸೌಲಭ್ಯಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಕಿತ್ತಳೆ, ಏಲಕ್ಕಿ ತೋಟಗಳ ಪುನಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?